**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಶಹಾಬಾದ**

**CC.No. 852/2021**

**CW : 08 PW: 2**

**ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ : 14.07.2026**

| | |
|---|---|
| ಹೆಸರು | : ಈರಮ್ಮ |
| ಗಂಡನ ಹೆಸರು | : ಅಯ್ಯಪ್ಪ |
| ವಯಸ್ಸು | : 57 |
| ಉದ್ಯೋಗ | : ಒಕ್ಕಲುತನ |
| ವಾಸಸ್ಥಳ | : ಮರತೂರ ಗ್ರಾಮ |

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ಚಾಸಾ-1 ನನ್ನ ತಮ್ಮ ಹಾಗೂ 1 ರಿಂದ 3 ನೇ ಆರೋಪಿತರು ಪರಿಚಯಸ್ಥರು.

ನಮ್ಮ ಮತ್ತು ಆರೋಪಿತರ ಮಧ್ಯೆ ಬಾಯಿ ಮಾತಿನ ಜಗಳವಾಗಿರುತ್ತದೆ. ಈ ವಿಚಾರವಾಗಿ ನಾನು ಪೋಲಿಸ ಠಾಣೆಗೆ ಚಾಸಾ-1 ರವರ ಜೊತೆ ಹೊದಾಗ ಪೋಲಿಸರು ನಿಪಿ.1 ರ ಮೇಲೆ ಸಹಿ ಪಡೆದಿದ್ದರು, ಸದರಿ ವಿಚಾರವನ್ನು ಹೊರತುಪಡಿಸಿ ನನಗೆ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ. ಆರೋಪಿತರು ನನಗೆ ಮತ್ತು ಚಾಸಾ-1 ರವರಿಗೆ ನೀರಿನ ವಿಚಾರವಾಗಿ ಬೈಯಿದಿರುವುದಿಲ್ಲ, ಹೊಡೆದಿರುವುದಿಲ್ಲ ಮತ್ತು ಹಲ್ಲೆ ಮಾಡಿರುವುದಿಲ್ಲ ಹಾಗೂ ಜೀವ ಬೆದರಿಕೆ ಹಾಕಿರುವುದಿಲ್ಲ. ಆರೋಪಿತರು ನನ್ನ ಸಿರೆ ಹಿಡಿದು ಎಳೆದಾಡಿ ನನಗೆ ಅವಮಾನ ಮಾಡಿರುವುದಿಲ್ಲ. ಈ ವಿಚಾರವಾಗಿ ನನ್ನ ಹೇಳಿಕೆಯನ್ನು ನಿಡಿರುವುದಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ದಿನಾಂಕ 12.02.2021 ರಂದು ಮಧ್ಯಾಹ್ನ 2.30 ಕ್ಕೆ ಹರಿಜನ ವಾಡದ ಗಲ್ಲಿ ರಸ್ತೆಯಲ್ಲಿ ಚಾಸಾ-1 ರವರು ಕೆಲಸ ಮಾಡುತ್ತಿದ್ದಾಗ, 1 ರಿಂದ 3 ನೇ ಆರೋಪಿತರು ಚಾಸಾ-1 ರವರ ಎದೆಯ ಮೇಲಿನ ಅಂಗಿ ಹಿಡಿದು ಅವಾಚ್ಯ ಶಬ್ದಗಳಿಂದ ಬೈದು ಕೈಯಿಂದ ಕಪಾಳದ ಮೇಲೆ ಹೊಡೆದು, ಅಲ್ಲೆ ಬಿದ್ದ ಒಂದು ಕಲ್ಲನು ತೆಗೆದುಕೊಂಡು ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಜಗಳ ಬಿಡಿಸಲು ಬಂದಾಗ 1 ರಿಂದ 3 ನೇ ಆರೋಪಿತರು ನನ್ನ ಕೈ ಹಿಡಿದು ಎಳೆದಾಡಿ ಬೆನ್ನಿನ ಮೇಲೆ ಹೊಡೆದು ಅವಮಾನ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆಗ ಚಾಸಾ-4 ರಿಂದ

7 ರವರು ಜಗಳ ಬಿಡಿಸುವಾಗ, ಆರೋಪಿತರು ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ದಿನಾಂಕ 14.02.2021 ರಂದು ಈಗ ಓದಿ ಹೇಳಿದಂತೆ ನನ್ನ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿ.3 ಎಂದು ಗುರುತಿಸಲಾಯಿತು. ನಿಪಿ.3 ರಲ್ಲಿರುವ ವಿಚಾರಗಳು ನನಗೆ ಗೊತ್ತಿದ್ದರೂ ಆರೊಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರೊಂದಿಗೆ ನಾವು ರಾಜಿ ಮಾಡಿಕೊಂಡಿರುತ್ತೇವೆ ಎಂದರೆ ಸರಿ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ**

ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲು ಏನೂ ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ : ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ ಇದೆ.**

**ಪ್ರ.ದ.ನ್ಯಾ.ದಂ.ಗಳು, ಶಹಾಬಾದ**